ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 53 ಸೇವನೆ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ:19.08.2021

**ಸುತ್ತೋಲೆ**

ವಿಷಯ: ದಿನಾಂಕ 22.03.2022 ರೊಳಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಬಗ್ಗೆ.

ಉಲ್ಲೇಖ: ಅಧಿಸೂಚನೆ ಸಂಖ್ಯೆ:ಸಿಆಸುಇ 11 ಸೇವನೆ 2020, ದಿನಾಂಕ:15.05.2020.

****

ಕರ್ನಾಟಕ ಸಿವಿಲ್ ಸೇವಾ(ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012ರ ನಿಯಮ 1(3)ರಲ್ಲಿ ನಿರ್ದಿಷ್ಟಪಡಿಸಿರುವ ಹುದ್ದೆಗಳನ್ನು ಹೊರತುಪಡಿಸಿ ಇನ್ನಿತರ ಎಲ್ಲಾ ಅಭ್ಯರ್ಥಿಗಳಿಗೆ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಕಡ್ಡಾಯಗೊಳಿಸಿದೆ. ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಸರ್ಕಾರ ಅಥವಾ ಅದು ಅನುಮೋದಿಸಿದ ಏಜೆನ್ಸಿಯು ನಡೆಸತಕ್ಕದ್ದು ಎಂಬುದಾಗಿದ್ದು, ಪ್ರಸ್ತುತ ಸರ್ಕಾರದಿಂದ ಅನುಮೋದಿಸಲ್ಪಟ್ಟ ಕಿಯೋನಿಕ್ಸ್ ಸಂಸ್ಥೆಯ ಮೂಲಕ ನಡೆಸಲಾಗುತ್ತಿದೆ. ನೇರ ನೇಮಕಾತಿ ಹೊಂದಿರುವ ಮತ್ತು ಸೇವಾ ನಿರತ ಸರ್ಕಾರಿ ನೌಕರರುಗಳು ನಿಗದಿಪಡಿಸಿರುವ ಅಂಕಗಳನ್ನು ಪಡೆದು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಉತ್ತೀರ್ಣರಾಗಬೇಕಾಗಿರುತ್ತದೆ.

ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಲು ಕಾಲಮಿತಿಯನ್ನು ಕಾಲಕಾಲಕ್ಕೆ ವಿಸ್ತರಿಸಲಾಗಿದೆ. ಮೇಲ್ಕಂಡ ಉಲ್ಲೇಖದಲ್ಲಿನ ಅಧಿಸೂಚನೆಯನ್ವಯ ಸರ್ಕಾರಿ ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ದಿನಾಂಕ:22.3.2022 ರೊಳಗೆ ತೆಗೆದುಕೊಂಡು ಉತ್ತೀರ್ಣರಾಗಬೇಕಾಗುತ್ತದೆ. ಸದರಿ ದಿನಾಂಕದ ನಂತರ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗದ ನೌಕರರು ಪರಿವೀಕ್ಷಣಾ ಅವಧಿ, ಮುಂಬಡ್ತಿ ಹಾಗೂ ವಾರ್ಷಿಕ ವೇತನ ಬಡ್ತಿ ಇತ್ಯಾದಿಗಳನ್ನು ಪಡೆಯಲು ಅನರ್ಹರಾಗುತ್ತಾರೆ. ಆದುದರಿಂದ, ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೆಗೆದುಕೊಳ್ಳಲು ಬಾಕಿ ಇರುವ ಸರ್ಕಾರಿ ನೌಕರರು ಕೂಡಲೇ ಪರೀಕ್ಷೆ ತೆಗೆದುಕೊಂಡು ಉತ್ತೀರ್ಣರಾಗುವಂತೆ ಸೂಚಿಸಲಾಗಿದೆ.

ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು ಮೇಲ್ಕಂಡ ಸೂಚನೆಯನ್ನು ತಮ್ಮ ಅಧೀನಕ್ಕೊಳಪಡುವ ನೌಕರರ ಗಮನಕ್ಕೆ ತರುವಂತೆ ಈ ಮೂಲಕ ತಿಳಿಸಲಾಗಿದೆ.

Thejavathi 19/8/2021
(ತೇಜಾವತಿ.ಎನ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-ವಿಶೇಷ ಕೋಶ).

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ-ಇದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ, ಅದರ 100 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸೇವಾ ನಿಯಮಗಳು-1, ಕೊಠಡಿ ಸಂಖ್ಯೆ:31, ವಿಧಾನಸೌಧ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.